ಗಣಕ ಕೇಂದ್ರಗಳಿಗೆ. Part-I
ಟಿ/ಎ
21/09/2020

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	45
ಮಾನ್ಯ ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	21-9-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ಬೀದರ್ ನಗರದಲ್ಲಿ ನೂರು ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಿ ಹಲವು ವರ್ಷಗಳಾದರೂ ಅದಕ್ಕೆ ಮೂಲಸೌಕರ್ಯ ಒದಗಿಸದೇ ಇರುವುದಕ್ಕೆ ಕಾರಣವೇನು: ಈ ಆಸ್ಪತ್ರೆ ಇಲ್ಲಿಯವರೆಗೆ ಉದ್ಘಾಟನೆಯಾಗದಿರಲು ಕಾರಣವೇನು;	ಬೀದರ ನಗರದಲ್ಲಿ ನೂರು ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಿದ್ದು, ಈಗಾಗಲೇ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಕರೋನ ಸೋಂಕಿನ ಹಿನ್ನೆಲೆಯಲ್ಲಿ ಉದ್ಘಾಟನೆಯು ವಿಳಂಬವಾಗಿದೆ. ತ್ವರಿತವಾಗಿ ಉದ್ಘಾಟನೆಗೊಳಿಸಲು ಕ್ರಮವಹಿಸಲಾಗುವುದು.
2	ಈ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳು ಇಲ್ಲಿಯವರೆಗೆ ನೇಮಕಗೊಂಡಿರುವುದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ವೈದ್ಯರು ಮತ್ತು ಸಿಬ್ಬಂದಿಗಳ ನೇಮಕಾತಿ ಮಾಡಿ ಸಾರ್ವಜನಿಕರ ಉಪಯೋಗಕ್ಕೆ ಒದಗಿಸುವುದು ಯಾವಾಗ?	ಈ ಆಸ್ಪತ್ರೆಯಲ್ಲಿ ವೈದ್ಯರ ಮತ್ತು ಸಿಬ್ಬಂದಿಗಳ ಹುದ್ದೆಗಳು ಎನ್.ಹೆಚ್.ಎಂ ಯೋಜನೆ ಅಡಿಯಲ್ಲಿ ಭರ್ತಿ ಮಾಡಲಾಗಿದೆ. ಹೆಚ್ಚುವರಿ ಹಾಸಿಗೆಗಳಿಗೆ ಅನುಗುಣವಾಗಿ ಅಗತ್ಯವಿರುವ ಸಿಬ್ಬಂದಿಯನ್ನು ಭರ್ತಿ ಮಾಡಲು ಸರ್ಕಾರದ ಅನುಮೋದನೆ ನೀಡಲಾಗಿದ್ದು, ಅತೀ ಶೀಘ್ರದಲ್ಲಿಯೇ ಸಾರ್ವಜನಿಕರ ಉಪಯೋಗಕ್ಕೆ ಒದಗಿಸಲಾಗುವುದು.

ಆಕುಕ 89 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು